ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ, ಮಾನ್ಯ ವಿಧಾನ ಪರಿಷತ್ ಸದಸ್ಯರು, ಇವರು ನಿಯಮ-72ರಡಿ ಸೂಚನೆಯಲ್ಲಿ ಪ್ರಸ್ತಾಪಿಸಿರುವ ಹುಬ್ಬಳ್ಳಿ ಬಾಲಮಂದಿರದ ಅಧೀಕ್ಷಕಿಯರವರು ಸಾರ್ವಜನಿಕರಿಗೆ ಮತ್ತು ಶಿಕ್ಷಕ, ನೌಕರರ ಮೇಲೆ ಇಲ್ಲ-ಸಲ್ಲದ ಲೈಂಗಿಕ ಕಿರುಕುಳದಂತಹ ಆರೋಪಗಳನ್ನು ಮಾಡಿ ಹಣಸುಲಿಗೆ ಮಾಡುತ್ತಿರುವುದು ಜಗತ್ ಜಾಹಿರವಾಗಿದೆ. ಇವರು ಈ ಹಿಂದೆ ಕಾರ್ಯ ನಿರ್ವಹಿಸಿದ ಸ್ಥಳಗಳಲ್ಲಿಯೂ ಇದೇ ರೀತಿಯಲ್ಲಿ ಹಣ ಸುಲಿಗೆ ಮಾಡಿರುವ ಅನೇಕ ದೂರುಗಳಿವೆ. ಇಂಥಹ ನೌಕರರಿಂದ ಇಲಾಖೆಗೆ/ಸರ್ಕಾರಕ್ಕೆ ಕೆಟ್ಟ ಹೆಸರು ಬರುವಂತಾಗಿದೆ. ಆದ್ದರಿಂದ, ಇಂತಹ ನೌಕರರನ್ನು ಸೂಕ್ತ ವಿಚಾರಣೆಗೊಳಪಡಿಸಿ, ಅಗತ್ಯ ಕಾನೂನು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಮಹಿಳಾ ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರ ಹೇಳಿಕೆ:

*****

ಬಾಲಕಿಯರ ಬಾಲಮಂದಿರ, ಘಂಟಿಕೇರಿ, ಹುಬ್ಬಳ್ಳಿ. ಇಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪ್ರಸ್ತುತ ಅಧೀಕ್ಷಕರ ವಿರುದ್ಧ ಸಾರ್ವಜನಿಕರು ಹಾಗೂ ಶಿಕ್ಷಕರ/ನೌಕರರ ಮೇಲೆ ಲೈಂಗಿಕ ಕಿರುಕುಳದಂತಹ ಆರೋಪಗಳನ್ನು ಮಾಡಿ ಹಣ ವಸೂಲಿ ಮಾಡುತ್ತಿರುವ ಬಗ್ಗೆ ಬಾಲಕಿಯರ ಬಾಲಮಂದಿರದ ಯಾವುದೇ ನೌಕರರಿಂದಾಗಲೀ ಅಥವಾ ಸಾರ್ವಜನಿಕರಿಂದಾಗಲೀ ಯಾವುದೇ ಲಿಖಿತ ದೂರುಗಳು ಸ್ವೀಕೃತವಾಗಿರುವುದಿಲ್ಲ. ಆದ್ದರಿಂದ ಸದರಿ ನೌಕರರ ಮೇಲೆ ಯಾವುದೇ ಶಿಸ್ತು ಕ್ರಮವಹಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಸಂಖ್ಯೆ: 06 ಮಭಾಬ 2020

(ಶ್ರೀಮತಿ ಶಶಿಕಲಾ ಅಣ್ಣಾಸಾಹೇಬ್ ಜೊಲ್ಲೆ)
ಮಹಿಳಾ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು